ಶ್ರೀ ಮಿರಾಜುದ್ದೀನ್ ಎನ್.ಪಟೇಲ್ (ಪೌರಾಡಳಿತ ಸಚಿವರು):-

1) ಹೌದು. ಹಿಂದಿನ ಮುಖ್ಯಮಂತ್ರಿಯವರು 3.00 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲು ಆದೇಶಿಸಿದ್ದರು. ಸರ್ಕಾರದ ಆದೇಶ ಸಂಖ್ಯೆ:ವನಇ 22 ಟಿಎಂಎಂ 94 ದಿನಾಂಕ:31.3.1994ರಲ್ಲಿ ಪುತ್ತೂರು ಪುರಸಭೆಗೆ 4.00 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಮೊತ್ತವನ್ನು ಪಾವತಿಸದಿರುವ ಪ್ರಶ್ನೆ ಉದ್ಭವಿಸುವುದಿಲ್ಲ.

2) ಇಲ್ಲ. ಉದ್ಭವಿಸುವುದಿಲ್ಲ.

ವಿಷಯ:- ಮಂಗಳೂರು ವಿಮಾನ ನಿಲ್ದಾಣದಲ್ಲಿ ಕಾರ್ಗೋ ಕಾಂಪ್ಲೆಕ್ಸ್.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 204 (421)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆ ಮತ್ತು ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಕಾರ್ಗೋ ಕಾಂಪ್ಲೆಕ್ಸ್ ತೆರೆಯುವ ಬಗ್ಗೆ ರಾಜ್ಯ ಸರ್ಕಾರವು ಉದ್ದೇಶ ಹೊಂದಿದೆಯೇ?

ಆ) ಈ ಬಗ್ಗೆ ಕೇಂದ್ರ ಸರ್ಕಾರದೊಡನೆ ಮಾತುಕತೆ ನಡೆಸಲಾಗಿದೆಯೇ? ಹಾಗಿದ್ದಲ್ಲಿ ಅದರ ಫಲಿತಾಂಶವೇನು?

ಶ್ರೀ ಆರ್.ವಿ.ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆ ಮತ್ತು ಮೂಲಭೂತ ಸಂಪನ್ಮೂಲ ಅಭಿವೃದ್ಧಿ ಸಚಿವರು):-

ಅ) ರಾಜ್ಯ ಸರ್ಕಾರದ ಕೈಗಾರಿಕಾ ನೀತಿ ನಿರೂಪಣೆ - 1996ರಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ನಿಯಮಿತವು (ಕೆಎಸ್ಐಐಡಿಸಿ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಕಾರ್ಗೋ ಕಾಂಪ್ಲೆಕ್ಸ್ ತೆರೆಯುವ ಬಗ್ಗೆ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

ಆ) ಕೆ.ಎಸ್.ಐ.ಐ.ಡಿ.ಸಿ. ಸ್ವಾಮ್ಯಕ್ಕೊಳಪಡುವ ಎಂ.ಎಸ್.ಐ.ಎಲ್.ಸಂಸ್ಥೆಯು ಈ ಬಗ್ಗೆ ಬೇಡಿಕೆ ಮತ್ತು ಅಂದಾಜು ವೆಚ್ಚಗಳ ಮಾಹಿತಿಯನ್ನು ಸಂಗ್ರಹಿಸುತ್ತಿದೆ. ಅದಾದನಂತರ ಕೇಂದ್ರ ಸರ್ಕಾರದೊಡನೆ ಸಮಾಲೋಚಿಸಲಾಗುವುದು.

ವಿಷಯ:- ಮೈಸೂರು ನಗರಕ್ಕೆ ನೀರಿನ ಸೌಲಭ್ಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 205 (494)

ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ):- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?